**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 29 ಸೇವನೆ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 03.04.2023

**ಸುತ್ತೋಲೆ**

**ವಿಷಯ:** ದಿನಾಂಕ:31.12.2023ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗುವ ಬಗ್ಗೆ.

**ಉಲ್ಲೇಖ:** 1) ಅಧಿಸೂಚನೆ ಸಂಖ್ಯೆ: ಸಿಆಸುಇ 43 ಸೇವನೆ 2008
ದಿನಾಂಕ: 07.03.2012
2) ಅಧಿಸೂಚನೆ ಸಂಖ್ಯೆ: ಸಿಆಸುಇ 136 ಸೇವನೆ 2022,
ದಿನಾಂಕ:17.02.2023

****

ರಾಜ್ಯ ಸರ್ಕಾರಿ ನೌಕರರಿಗೆ ಕಂಪ್ಯೂಟರ್ ಬಳಕೆಯ ಸಾಮಾನ್ಯ ಜ್ಞಾನವನ್ನು ಕಡ್ಡಾಯಗೊಳಿಸುವ ನಿಟ್ಟಿನಲ್ಲಿ ಉಲ್ಲೇಖ (1)ರನ್ವಯ ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ನ್ನು ರೂಪಿಸಲಾಗಿದೆ. ಸದರಿ ನಿಯಮಾವಳಿಗಳ ನಿಯಮ 1(3)ರಲ್ಲಿ ನಿರ್ದಿಷ್ಟಪಡಿಸಿರುವ ಹುದ್ದೆಗಳನ್ನು ಹೊರತುಪಡಿಸಿ ಉಳಿದಂತೆ ಎಲ್ಲಾ ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದುವುದನ್ನು ಕಡ್ಡಾಯಗೊಳಿಸಲಾಗಿದೆ. ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಸರ್ಕಾರ ಅಥವಾ ಅದು ಅನುಮೋದಿಸಿದ ಏಜೆನ್ಸಿಯು ನಡೆಸತಕ್ಕದೆಂದು ನಿರ್ದಿಷ್ಟಪಡಿಸಿದ್ದು, ಪ್ರಸ್ತುತ ಸರ್ಕಾರದಿಂದ ಅನುಮೋದಿಸಲ್ಪಟ್ಟ ಕಿಯೋನಿಕ್ಸ್ ಸಂಸ್ಥೆಯ ಮೂಲಕ ನಡೆಸಲಾಗುತ್ತಿದೆ. ಈ ನಿಯಮಗಳು ನೇರ ನೇಮಕಾತಿ ಹೊಂದಿದ ಮತ್ತು ಸೇವಾನಿರತ ಸರ್ಕಾರಿ ನೌಕರರಿಗೆ ಅನ್ವಯವಾಗುತ್ತವೆ.

ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಲು ನಿಗಧಿಪಡಿಸಿದ್ದ ಕಾಲಮಿತಿಯನ್ನು ಹಲವು ಕಾರಣಗಳಿಂದಾಗಿ ಕಾಲಕಾಲಕ್ಕೆ ವಿಸ್ತರಿಸಲಾಗಿದೆ. ಪ್ರಸ್ತುತ ಇರುವಂತೆ ಸೇವಾನಿರತ ಸರ್ಕಾರಿ ನೌಕರರು ಉಲ್ಲೇಖಿತ (2)ರ ಅಧಿಸೂಚನೆಯನ್ವಯ ನಿಗಧಿಪಡಿಸಿರುವ ದಿನಾಂಕ: 31.12.2023ರೊಳಗೆ ಹಾಗೂ ನೇರ ನೇಮಕಾತಿ ಹೊಂದಿದ ನೌಕರರು ದಿನಾಂಕ:31.12.2023ರೊಳಗೆ ಅಥವಾ ತಮ್ಮ ಪರಿವೀಕ್ಷಣಾ ಅವಧಿಯೊಳಗೆ ಯಾವುದು ನಂತರವೋ ಅದರೊಳಗಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದು ಕಡ್ಡಾಯವಾಗಿರುತ್ತದೆ. ಸದರಿ ಅವಧಿಯೊಳಗಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ನೌಕರರು ಪರಿವೀಕ್ಷಣಾ ಅವಧಿ, ಮುಂಬಡ್ತಿ ಹಾಗೂ ವಾರ್ಷಿಕ ವೇತನ ಬಡ್ತಿ ಇತ್ಯಾದಿಗಳನ್ನು ಪಡೆಯಲು ಅನರ್ಹರಾಗುತ್ತಾರೆ. ಆದುದರಿಂದ, ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದೆ ಇರುವ ಸರ್ಕಾರಿ ನೌಕರರು ಕೂಡಲೇ ಪರೀಕ್ಷೆ ತೆಗೆದುಕೊಂಡು ಉತ್ತೀರ್ಣರಾಗಲು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರುಗಳು ಮೇಲ್ಕಂಡ ಸೂಚನೆಯನ್ನು ತಮ್ಮ ಇಲಾಖೆಗಳ ಅಧೀನಕ್ಕೊಳಪಡುವ ಕ್ಷೇತ್ರ ಇಲಾಖೆಗಳ /ನೌಕರರ ಗಮನಕ್ಕೆ ತರುವಂತೆ ಈ ಮೂಲಕ ತಿಳಿಸಲಾಗಿದೆ.

ವೀರಭದ್ರ 3-4-2023
(ವೀರಭದ್ರು)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1).

ಇವರಿಗೆ,

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಉತ್ಪನ್ನ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
15. *ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು.
17. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನಂ.10, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ- 110011.
18. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತಕಾರ್ಯದರ್ಶಿಗಳು.
19. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
20. ಸಚಿವಾಲಯದ ಎಲ್ಲಾ ಶಾಖೆಗಳು
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.
22. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)